ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಸ್ವಚ್ಛ ಭಾರತ ಮಿಷನ್ ಯೋಜನೆಯ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

861 (955) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಲ್ಲಿ ಸ್ವಚ್ಛ ಭಾರತ ಮಿಷನ್ ಮಾದರಿಯಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳಲ್ಲಿನ ಘನ ಮತ್ತು ದ್ರವ ತ್ಯಾಜ್ಯವನ್ನ ವಿಲೇವಾರಿ ಮಾಡಲು ರಾಜ್ಯದ ಪ್ರತಿ ಗ್ರಾಮ ಪಂಚಾಯಿತಿಗೆ ನೀಡಿರುವ ಅನುದಾನವೆಷ್ಟು; ಎಷ್ಟು ಗ್ರಾಮ ಪಂಚಾಯಿತಿಗಳಿಗೆ ಈ ಅನುದಾನವನ್ನು ನೀಡಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ತುಮಕೂರು ಜಿಲ್ಲೆಯಲ್ಲಿ ಘನ ಮತ್ತು ದ್ರವ ತ್ಯಾಜ್ಯವನ್ನು ವಿಲೇವಾರಿ ಮಾಡಲು ಎಷ್ಟು ಗ್ರಾಮ ಪಂಚಾಯಿತಿಗಳನ್ನು ಆಯ್ಕೆ ಮಾಡಿಕೊಂಡು ಇವುಗಳಿಗೆ ನೀಡಿರುವ ಅನುದಾನವೆಷ್ಟು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯಡಿ ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ಬಂದಿರುವ ಅನುದಾನವೆಷ್ಟು; ಇದರಲ್ಲಿ ರಾಜ್ಯ ಸರ್ಕಾರದ ಪಾಲಿನ ಅನುದಾನವೆಷ್ಟು; ಈ ಎರಡು ಅನುದಾನವನ್ನು ಸೇರಿ ರಾಜ್ಯದ 30 ಜಿಲ್ಲೆಗಳಿಗೆ ಹಂಚಿಕೆ ಮಾಡಿರುವ ಅನುದಾನದ ವಿವರವಾದ ಅಂಕಿ ಅಂಶಗಳನ್ನು ಒದಗಿಸುವುದು ;

(ಈ) ರಾಜ್ಯದಲ್ಲಿರುವ ಎಲ್ಲಾ ಗ್ರಾಮ ಪಂಚಾಯಿತಿಗಳನ್ನು ಈ ಯೋಜನೆಯಡಿ ತರಲು ಸರ್ಕಾರಕ್ಕಿರುವ ತೊಂದರೆ ಏನು; ಯಾವಾಗ ಇದನ್ನು ಕಾರ್ಯಗತಗೊಳಿಸಲಾಗುವುದು;

(ಉ) 2020-21ನೇ ಸಾಲಿನಲ್ಲಿ ಕೇಂದ್ರ ಸರ್ಕಾರ ಈ ಯೋಜನೆಗೆ ಒದಗಿಸಿರುವ ಅನುದಾನವೆಷ್ಟು; ರಾಜ್ಯ ಸರ್ಕಾರ ಈ ಸಾಲಿನ ಆರ್ಥಿಕ ವರ್ಷದಲ್ಲಿ ಎಷ್ಟು ಅನುದಾನವನ್ನು ಕಾಯ್ದಿರಿಸಿದೆ? (ಮಾಹಿತಿ ನೀಡುವುದು)